ಆ) ಹಾಗಿದ್ದಲ್ಲಿ, ಹಿರಿಯ ಪ್ರಾಥಮಿಕ ಶಾಲೆಗಳಿಗೆ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಎಲ್ಲಾ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ದೈಹಿಕ ಶಿಕ್ಷಕರ ನೇಮಕಾತಿ ಕಡ್ಡಾಯವಲ್ಲ. ಮಕ್ಕಳ ಸಂಖ್ಯೆಗನುಗುಣವಾಗಿ ದೈಹಿಕ ಶಿಕ್ಷಕರನ್ನು ನೇಮಕ ಮಾಡಲಾಗುತ್ತಿದೆ.

ಆ) * ಯಾವ ಶಾಲೆಯಲ್ಲಿ 280 ಕ್ಕೂ ಹೆಚ್ಚು ಮಕ್ಕಳ ಸಂಖ್ಯೆ ಇದೆಯೋ ಆ ಶಾಲೆಗೆ ಮಕ್ಕಳ ಶಿಕ್ಷಕರ ಅನುಪಾತಕ್ಕನುಗುಣವಾಗಿ ಅಗತ್ಯ ಇದ್ದಲ್ಲಿ ಏಳನೆಯ ಹುದ್ದೆಗೆ ದೈಹಿಕ ಶಿಕ್ಷಕರನ್ನು ಕಡ್ಡಾಯವಾಗಿ ನೇಮಕ ಮಾಡಲು ಅವಕಾಶ ಕಲ್ಪಿಸಲಾಗಿದೆ. ಹಾಗೆಯೇ ಏಳನೇ ತರಗತಿಯವರೆಗೆ ಇರುವ ಶಾಲೆಗಳಲ್ಲಿ ದೈಹಿಕ ಶಿಕ್ಷಕರನ್ನು ಕಡ್ಡಾಯವಾಗಿ ನೇಮಕ ಮಾಡಲು ಅವಕಾಶ ಕಲ್ಪಿಸಲಾಗುವುದು.

* ಕಾಲಕಾಲಕ್ಕೆ ಅಗತ್ಯತೆಗನುಗುಣವಾಗಿ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುತ್ತಿದ್ದು, ಇತ್ತೀಚೆಗೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ 590 ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ದಿನಾಂಕ 25-01-2007 ರಂದು ಅಧಿಸೂಚನೆ ಹೊರಡಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ.

1607 (1900) ಶ್ರೀ ನರಸಿಂಹಸ್ವಾಮಿ ಜೆ. (ದೊಡ್ಡಬಳ್ಳಾಪುರ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರವು ಎಲ್ಲಾ ಪ್ರೌಢಶಾಲಾ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಉಚಿತವಾಗಿ ವಿತರಿಸುತ್ತಿರುವ ಸೈಕಲ್‌ಗಳ ಸೂಕ್ತ ನಿರ್ವಹಣೆಗೆ ಶಾಲೆಗಳಲ್ಲಿ ಸೈಕಲ್ ಸ್ಟ್ಯಾಂಡ್‌ಗಳನ್ನು ನಿರ್ಮಿಸುವ ಯೋಜನೆ ಸರ್ಕಾರಕ್ಕೆ ಇದೆಯೇ;

ಆ) ಇದ್ದಲ್ಲಿ ಸರ್ಕಾರ ಸೈಕಲ್‌ಗಳನ್ನು ಸುಸ್ಥಿತಿಯಲ್ಲಿಡಲು ಈ ಕೂಡಲೇ ಶಾಲೆಗಳ ಆವರಣದಲ್ಲಿ ಸೂಕ್ತ ನಿಲ್ದಾಣಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳುವರೆ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) –ಇಲ್ಲ–

ಆ) ಉದ್ಭವಿಸುವುದಿಲ್ಲ

1609 (2114) ಶ್ರೀ ನರಸಿಂಹಸ್ವಾಮಿ ಜೆ. (ದೊಡ್ಡಬಳ್ಳಾಪುರ) :–ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನ್ನಡ ಮಾಧ್ಯಮದ ಶಾಲೆಗಳಿಗೆ ಅನುಮತಿ ಪಡೆದು ಆಂಗ್ಲ ಮಾಧ್ಯಮದಲ್ಲಿ ಬೋಧನೆ ಮಾಡುತ್ತಿರುವ ಶಾಲೆಗಳ ಮಾನ್ಯತೆಯನ್ನು ರದ್ದುಪಡಿಸುವುದು ಹಾಗೂ ಆ ಶಾಲೆಗಳಿಗೆ ವಿದ್ಯಾರ್ಥಿಗಳನ್ನು ಸೇರಿಸಬಾರದೆಂದು ಪತ್ರಿಕೆಗಳಲ್ಲಿ ಪ್ರಕಟಿಸಿರುವುದು ನಿಜವಲ್ಲವೇ;

ಆ) ಬಂದಿದ್ದಲ್ಲಿ, ಇಂತಹ ಶಾಲೆಗಳ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳಲಾಗಿದೆ;

ಇ) ಇಲ್ಲದಿದ್ದಲ್ಲಿ, ಗ್ರಾಮಾಂತರ ಪ್ರದೇಶಗಳಲ್ಲಿಯೂ ಸಹ ಸಮಾನ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸಲು ಸರ್ಕಾರ ಯಾವುದಾದರೂ ಕ್ರಮ ತೆಗೆದುಕೊಂಡಿದೆಯೇ;

ಈ) ಆಂಗ್ಲ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡಿರುವ ವಿದ್ಯಾರ್ಥಿಗಳ ಭವಿಷ್ಯಕ್ಕೆ ಸರ್ಕಾರ ಯಾವ ಪರ್ಯಾಯ ಯೋಜನೆಯನ್ನು ರೂಪಿಸಿದೆ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು

ಆ) ಕನ್ನಡ ಮಾಧ್ಯಮದಲ್ಲಿ ಬೋಧನೆ ಮಾಡಲು ಅನುಮತಿ ಪಡೆದು, ಆಂಗ್ಲ ಮಾಧ್ಯಮದಲ್ಲಿ ಬೋಧನೆ ಮಾಡಿ, ಸರ್ಕಾರದ ನೀತಿಯನ್ನು ಉಲ್ಲಂಘಿಸಿದ ಶಾಲೆಗಳ ಮಾನ್ಯತೆಯನ್ನು ನಿಯಮಾನುಸಾರ ರದ್ದುಪಡಿಸಲಾಗಿದೆ.

ಇ) ಸರ್ಕಾರದ ದಿನಾಂಕ 21–10–2006 ರ ಆದೇಶ ಸಂಖ್ಯೆ ಇಡಿ 37 ಪಿಜಿಸಿ 2003 ರಲ್ಲಿ 1 ನೇ ತರಗತಿಯಿಂದ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ